ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	364
ಸದಸ್ಯರ ಹೆಸರು	:	ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು
ಉತ್ತರಿಸಬೇಕಾದ ದಿನಾಂಕ	:	10.12.2020

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು;</td><td>ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಪ್ರತಿ ವರ್ಷ ತಲಾ ರೂ.2.00 ಕೋಟಿಗಳ ಅನುದಾನವನ್ನು ನೀಡಲಾಗುತ್ತಿದೆ.</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಗೆ ಎಷ್ಟು ಹಣ ಬಿಡುಗಡೆಯಾಗಿದೆ; ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು;</td><td>ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ನಿಗದಿಯಾಗಿರುವ ಹಾಗೂ ಬಿಡುಗಡೆಯಾಗಿರುವ ಅನುದಾನದ ವಿವರಗಳು ಈ ಕೆಳಗಿನಂತಿವೆ:-
(ರೂ.ಕೋಟಿಗಳಲ್ಲಿ)
<table>
<tr><th>ಕ್ರ.ಸಂ</th><th>ವರ್ಷ</th><th>ನಿಗದಿಯಾಗಿರುವ ಅನುದಾನ</th><th>ಬಿಡುಗಡೆಯಾದ ಅನುದಾನ</th></tr>
<tr><td>1</td><td>2017-18</td><td>622.50</td><td>620.11</td></tr>
<tr><td>2</td><td>2018-19</td><td>600.00</td><td>462.99</td></tr>
<tr><td>3</td><td>2019-20</td><td>600.00</td><td>296.09</td></tr>
</table></td></tr>
<tr><td>ಇ)</td><td>2019-20 ಹಾಗೂ 2020-21ನೇ ಸಾಲಿನ ಅಂತ್ಯದ ವೇಳೆ ಸಮೀಪಿಸಿದ್ದರೂ ನಿಗದಿಯಾದ ಅನುದಾನ ಬಿಡುಗಡೆಯಾಗದೇ ಇರುವುದಕ್ಕೆ ಕಾರಣವೇನು; ಈ ಕುರಿತು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು;</td><td>ಆರ್ಥಿಕ ಇಲಾಖೆಯ ಆದೇಶದಂತೆ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿನ ಆರಂಭಿಕ ಶಿಲ್ಕು ಮತ್ತು ಬಿಡುಗಡೆಯಾಗಿರುವ ಅನುದಾನ ಸೇರಿ ಒಟ್ಟಾರೆ ಲಭ್ಯವಿರುವ ಅನುದಾನದಲ್ಲಿ ಶೇ 75 ರಷ್ಟು ವೆಚ್ಚವಾಗದೇ ಇರುವುದರಿಂದ ಉಳಿದ ಕಂತುಗಳನ್ನು ಬಿಡುಗಡೆಮಾಡಿರುವುದಿಲ್ಲ.</td></tr>
<tr><td>ಈ)</td><td>ವಿಧಾನ ಪರಿಷತ್ ಸದಸ್ಯರುಗಳ ಹೆಚ್ಚಿನ ತಾಲ್ಲೂಕು ಮತ್ತು ಜಿಲ್ಲೆಗಳನ್ನು ಪ್ರತಿನಿಧಿಸುತ್ತಿರುವುದರಿಂದ ಇವರಿಗೆ ಅನುದಾನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?</td><td>ಇಲ್ಲಾ</td></tr>
</table>

ಸಂಖ್ಯೆ:ಪಿಡಿಎಸ್ 96 ಕೆಎಲ್ಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ